ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 003.**

## 2018–19ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಮಾದರಿ ಪ್ರಶ್ನೆಪತ್ರಿಕೆಗಳನ್ನು ಪ್ರಕಟಿಸುವ ಕುರಿತು.
## ವಿದ್ಯಾರ್ಥಿಗಳು / ಶಿಕ್ಷಕರ ಗಮನಕ್ಕೆ

2018–19ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ 10ನೇ ತರಗತಿಯ ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳ ಪಠ್ಯಪುಸ್ತಕಗಳನ್ನು ಪರಿಷ್ಕೃತಗೊಳಿಸಲಾಗಿದೆ.

ಈ ವಿಷಯಗಳ ಪ್ರಶ್ನೆ ಪತ್ರಿಕೆಯ ಮಾದರಿಯು (Question paper pattern) ಸಿಸಿಇ ಪ್ರಾರಂಭವಾದ ನಂತರ 2014–15ನೇ ಸಾಲಿನಿಂದ ತಯಾರಿಸಿದ ಪ್ರಶ್ನೆ ಪತ್ರಿಕೆ ರೀತಿಯಲ್ಲಿಯೇ ಮುಂದುವರೆಯುತ್ತದೆ.

ಈ ಹಿನ್ನಲೆಯಲ್ಲಿ ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳ ಪರಿಷ್ಕೃತ ಪಠ್ಯವಸ್ತುವನ್ನು ಆಧರಿಸಿ ಕನ್ನಡ ಹಾಗೂ ಆಂಗ್ಲ ಮಾಧ್ಯಮದಲ್ಲಿ ಮಾದರಿ ಪ್ರಶ್ನೆಪತ್ರಿಕೆಗಳನ್ನು ಸಿದ್ದಪಡಿಸಿ, ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಈ ಮಾದರಿ ಪ್ರಶ್ನೆಪತ್ರಿಕೆಗಳನ್ನು ಉಪಯೋಗಿಸಿಕೊಳ್ಳಬಹುದು.

2017–18ನೇ ಸಾಲಿನಲ್ಲಿ ಹತ್ತನೇ ತರಗತಿಯ ಭಾಷಾ ವಿಷಯಗಳಲ್ಲಿ ಪರಿಷ್ಕೃತಗೊಳಿಸಲಾಗಿದ್ದು, ಈಗಾಗಲೇ ಏಪ್ರಿಲ್/ಜೂನ್–2018ರಲ್ಲಿ ಈ ಪರಿಷ್ಕೃತ ಭಾಷಾ ವಿಷಯಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ರಚಿಸಿ ಎರಡು ಪರೀಕ್ಷೆಗಳನ್ನು ನಡೆಸಲಾಗಿದೆ. ಅಭ್ಯಾಸ ಮಾಡಲು ಹಿಂದಿನ ಎರಡು ವರ್ಷಗಳ ಪ್ರಶ್ನೆ ಪತ್ರಿಕೆಗಳತ್ತ ಗಮನ ಸೆಳೆಯಬಹುದಾಗಿದೆ ಎಂದು ಮಂಡಳಿಯು ಪ್ರಕಟಿಸಿದೆ.

ಪ್ರಕಟಿಸಲಾಗಿರುವ ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳ ಪ್ರಶ್ನೆಪತ್ರಿಕೆಗಳು **"ಕೇವಲ ಮಾದರಿಯಾಗಿರುತ್ತವೆ "** ಎಂದು ತಿಳಿಯಪಡಿಸಿದೆ.

(ವಿ.ಸುಮಂಗಲ) 21/7/18
ನಿರ್ದೇಶಕರು ಪರೀಕ್ಷೆಗಳು